5) ಈ ನಿಲಯಗಳಲ್ಲಿರುವ ವಿದ್ಯಾರ್ಥಿಗಳ ಸಂಖ್ಯೆ ಎಷ್ಟು ಹಾಗೂ ಕುಂಬಾರ ಜನಾಂಗದ ವಿದ್ಯಾರ್ಥಿಗಳಿಗೆ ವಿದ್ಯಾರ್ಥಿ ವೇತನವನ್ನು ನೀಡಲಾಗುತ್ತಿದೆಯೇ?

ಶ್ರೀ ಕಾಗೋಡು ತಿಮ್ಮಪ್ಪ (ಸಮಾಜ ಕಲ್ಯಾಣ ಸಚಿವರು):

1) ಇಲ್ಲ.

2) ಉದ್ಭವಿಸುವುದಿಲ್ಲ.

3) ಉದ್ಭವಿಸುವುದಿಲ್ಲ.

4) ಉದ್ಭವಿಸುವುದಿಲ್ಲ.

5) ಉದ್ಭವಿಸುವುದಿಲ್ಲ.

ವಿದ್ಯಾರ್ಥಿನಿಲಯಗಳಲ್ಲಿ ಇರದ ಕುಂಬಾರ ಜನಾಂಗದ ವಿದ್ಯಾರ್ಥಿಗಳಿಗೆ ನಿಯಮಾನುಸಾರ ವಿದ್ಯಾರ್ಥಿವೇತನವನ್ನು ಮಂಜೂರು ಮಾಡಲಾಗುತ್ತದೆ.

ಅಕ್ರಮ ಗಣಿಗಾರಿಕೆಯನ್ನು ಇಲಾಖೆಯ ಅಧಿಕಾರಿಗಳ ಸಂಬಂಧಿಗಳು ನಡೆಸುತ್ತಿರುವುದು.

264(489)

ಶ್ರೀ ಸಿ.ಗುರುಸ್ವಾಮಿ (ಚಾಮರಾಜನಗರ): ಮಾನ್ಯ ಗಣಿ ಮತ್ತು ಭೂ ವಿಜ್ಞಾನ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಗಣಿ ಮತ್ತು ಭೂ ವಿಜ್ಞಾನ ಇಲಾಖೆಯಲ್ಲಿ ಅಕ್ರಮ ಗಣಿಗಾರಿಕೆಯನ್ನು ಗಣಿ ಮತ್ತು ಭೂ ವಿಜ್ಞಾನ ಇಲಾಖೆಯ ಅಧಿಕಾರಿಗಳ ಸಂಬಂಧಿಕರುಗಳು ನಡೆಸಿ ಇಲಾಖೆಗೆ ಬರಬೇಕಾದ ಆದಾಯ ಕಡಿಮೆ ಮಾಡುತ್ತಿರುವ ಸಂಗತಿ ಸರ್ಕಾರದ ಗಮನಕ್ಕೆ ಬಂದಿದೆಯೇ?

ಆ) ನಡೆದಿದ್ದಲ್ಲಿ ಯಾವ ಯಾವ ಸ್ಥಳಗಳಲ್ಲಿ ಇಂತಹ ಪ್ರಕರಣಗಳನ್ನು ಪತ್ತೆ ಹಚ್ಚಲಾಗಿದೆ?

ಇ) ಚಾಮರಾಜ ನಗರ ವ್ಯಾಪ್ತಿಯಲ್ಲಿ ಇಂತಹ ಇಲಾಖಾ ಅಧಿಕಾರಿಗಳ ಸಂಬಂಧಿಗಳು ಅಕ್ರಮವಾಗಿ ಗಣಿಗಾರಿಕೆ ನಡೆಸಿ ಇಲಾಖೆಗೆ ವಂಚಿಸಿರುವುದು ಸರ್ಕಾರದ

ಗಮನಕ್ಕೆ ಬಂದಿದೆಯೇ?

ಈ) ಇದಕ್ಕೆ ಇಲಾಖೆಯ ಅಧಿಕಾರಿಗಳು ಕಾರಣರೆ? ಹೇಗೆ? ಇಂತಹ ಪ್ರಕರಣದಲ್ಲಿ ತಪ್ಪಿತಸ್ಥರೆಂದು ಕಂಡು ಬಂದಂತಹ ಅಧಿಕಾರಿಗಳ ವಿರುದ್ಧ ಯಾವ ಕ್ರಮ ಜರುಗಿಸಲಾಗಿದೆ.

ಉ) ಇಂತಹ ಪ್ರಕರಣಗಳು ರಾಜ್ಯದ ಗಣಿ ಮತ್ತು ಭೂ ವಿಜ್ಞಾನ ಇಲಾಖೆ ಬೊಕ್ಕಸಕ್ಕೆ ನಷ್ಟವನ್ನುಂಟು ಮಾಡುವುದಿಲ್ಲವೇ?

ಶ್ರೀ ವಿ.ಮುನಿಯಪ್ಪ (ಗಣಿ ಮತ್ತು ಭೂ ವಿಜ್ಞಾನ ಸಚಿವರು):

ಅ) ಇಲ್ಲ.

ಆ) ಉದ್ಭವಿಸುವುದಿಲ್ಲ.

ಇ) ಇಲ್ಲ

ಈ) ಉದ್ಭವಿಸುವುದಿಲ್ಲ.

ಉ) ಉದ್ಭವಿಸುವುದಿಲ್ಲ.

ಎ.ಡಿ.ಬಿ. ಯೋಜನೆ ಕುರಿತು.

266(251)

ಶ್ರೀ ಗೋಪಾಲ ಭಂಡಾರಿ ಹೆಚ್.(ಕಾರ್ಕಳ): ಮಾನ್ಯ ಪೌರಾಡಳಿತ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಎ.ಡಿ.ಬಿ. ಯೋಜನೆಯಲ್ಲಿ ಕರಾವಳಿ ಜಿಲ್ಲೆಯ ಕಾರ್ಕಳ, ಮೂಡಬಿದ್ರೆ, ಬಂಟ್ವಾಳ, ಮೂಲ್ಕಿ ಪುರಸಭೆಗಳನ್ನು ಸೇರಿಸದಿರಲು ಕಾರಣವೇನು;

ಆ) ಈ ಪುರಸಭೆಗಳನ್ನು ಹೆಚ್ಚುವರಿಯಾಗಿ ಸೇರಿಸುವ ಬಗ್ಗೆ ಕ್ರಮ ಕೈಗೊಳ್ಳಲಾಗಿದೆಯೆ; (ವಿವರ ಒದಗಿಸುವುದು)

ಶ್ರೀ ಮಲ್ಲಿಕಾರ್ಜುನ ನಾಗಪ್ಪ (ಪೌರಾಡಳಿತ ರಾಜ್ಯ ಸಚಿವರು):

ಅ) ಎ.ಡಿ.ಬಿ. ಯೋಜನೆಯಲ್ಲಿ ಈ ಕೆಳಕಂಡ ಅಂಶಗಳ ಆಧಾರದ ಮೇಲೆ